ಕರ್ನಾಟಕ ಸರ್ಕಾರ
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/15/ರಾಗಾಸಾ/ಸುತ್ತೋಲೆ/2017-18/ವಿವೇ ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:23.05.2017.

**ಸುತ್ತೋಲೆ**

ವಿಷಯ : ರಾಜೀವ್‌ಗಾಂಧಿ ಸಾಲ ರೂಪದ ವಿದ್ಯಾರ್ಥಿವೇತನ ಯೋಜನೆಯ ಬಗ್ಗೆ 2017-18ನೇ ಸಾಲಿನ ದಾಖಲಾತಿ ಸಂದರ್ಭದಲ್ಲಿ ಪ್ರಚಾರ ನೀಡುವ ಬಗ್ಗೆ

ಉಲ್ಲೇಖ:
1. ದಿ:17.01.2017ರ ಸರ್ಕಾರದ ಅಭಿವೃದ್ಧಿ ಆಯುಕ್ತರು, ಅಪರ ಮುಖ್ಯ ಕಾರ್ಯದರ್ಶಿಗಳ ಸಭೆಯ ನಡವಳಿಗಳು.
2. ಈ ಕಛೇರಿ ಸುತ್ತೋಲೆ ಸಂಖ್ಯೆ: ಕಾಶಿಇ/08/ ರಾಗಾಸಾ/2017-18/ವಿವೇ, ದಿ:06.05.2017.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ಯೋಜನೆ ಬಗ್ಗೆ 2017-18ನೇ ಸಾಲಿನ ದಾಖಲಾತಿ ಪ್ರಕ್ರಿಯೆ ಪ್ರಾರಂಭವಾಗಿರುವ ಸಂದರ್ಭದಲ್ಲಿ ತಮ್ಮ ಕಾಲೇಜುಗಳಲ್ಲಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಕೋರಿ ಬರುವ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಅರಿವು/ತಿಳುವಳಿಕೆ ನೀಡುವ ದೆಸೆಯಲ್ಲಿ ಕಾಲೇಜಿನ ಮುಖ್ಯ ದ್ವಾರದ ಬಳಿ ಹಾಗೂ ಕಾಲೇಜಿನ ಸುತ್ತಮುತ್ತಲ ಆವರಣದಲ್ಲಿ ಬ್ಯಾನರ್‌ಗಳನ್ನು ಅಳವಡಿಸುವುದು. ಸೂಚನಾ ಫಲಕದಲ್ಲಿ ಈ ಬಗ್ಗೆ ಸವಿವರವಾಗಿ ಪ್ರಕಟಿಸುವುದು.

ರೂ.2.5 ಲಕ್ಷಕ್ಕಿಂತ ಕಡಿಮೆ ಆದಾಯದ ಬಡ ಕುಟುಂಬದ ವಿದ್ಯಾರ್ಥಿಗಳು/ಪೋಷಕರಿಗೆ ಕಾಲೇಜಿನ ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ನೋಡಲ್ ಆಫೀಸರ್‌ರವರು ಅವರುಗಳಿಗೆ ಕಾಲೇಜಿಗೆ ದಾಖಲಾತಿ ಪಡೆಯುವ ಸಂದರ್ಭದಲ್ಲಿಯೇ ಪೂರ್ಣ ಮಾಹಿತಿ ನೀಡುವುದು. ಮತ್ತು ಸಾಲ ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು/ಪೋಷಕರಿಗೆ ಸ್ಥಳೀಯ ಬ್ಯಾಂಕ್‌ಗಳ ಅಧಿಕಾರಿಗಳನ್ನು ಭೇಟಿ ಮಾಡಿಸಿ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಪಡೆದು ಅರ್ಹ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಸಾಲ ದೊರಕಿಸಿ ಕೊಡಬೇಕೆಂದು ತಿಳಿಸಲಾಗಿದೆ.

ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ಯೋಜನೆಯ ಬಗ್ಗೆ ಕರಪತ್ರಗಳನ್ನು ಹಂಚಿ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಹೆಚ್ಚು ಪ್ರಚಾರ ನೀಡುವುದು.

ತರಗತಿಗಳು ಪ್ರಾರಂಭವಾದ ಮೇಲೆ ಬ್ಯಾಂಕ್ ಅಧಿಕಾರಿಗಳನ್ನು ಕಾಲೇಜಿಗೆ ಕರೆಸಿ ಸದರಿ ಯೋಜನೆಯ ಬಗ್ಗೆ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳುವುದು.

ಉಲ್ಲೇಖ (2)ರ ಪತ್ರದಂತೆ ಪ್ರತಿ ಜಿಲ್ಲೆಗೆ ಒಂದು ತ್ರೈಮಾಸಿಕ ಅವಧಿಗೆ (3 ತಿಂಗಳಿಗೆ) ಕನಿಷ್ಠ 25 ವಿದ್ಯಾರ್ಥಿಗಳಿಗೆ ಸಾಲ ಕೊಡಿಸಬೇಕೆಂಬ ಟಾರ್ಗೆಟ್ ನೀಡಲಾಗಿದ್ದು ಪ್ರತಿಯೊಂದು ಸರ್ಕಾರಿ ಅಥವಾ ಅನುದಾನಿತ ಪದವಿ ಕಾಲೇಜಿನ ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ಯೋಜನೆಯ ನೋಡಲ್ ಅಧಿಕಾರಿ ಮತ್ತು ಪ್ರಾಂಶುಪಾಲರು ಈ ಬಗ್ಗೆ ಸಂಪೂರ್ಣ ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವುದು.

ಸ್ಥಳೀಯ ದಿನ ಪತ್ರಿಕೆ, ವಾರಪತ್ರಿಕೆ, ಮಾಸಿಕ ಪತ್ರಿಕೆಗಳಲ್ಲಿ ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ಯೋಜನೆ ಬಗ್ಗೆ ಪ್ರಚಾರ ನೀಡುವುದು.

ಸಾಲ ಪಡೆಯ ಬಯಸುವ ವಿದ್ಯಾರ್ಥಿಗಳಿಂದ ಬ್ಯಾಂಕ್‌ನವರು ನೀಡುವ ಅರ್ಜಿಗಳನ್ನು ಭರ್ತಿ ಮಾಡಿಸಿ ಪಡೆದು Lead District ಮ್ಯಾನೇಜರ್‌ರವರಿಗೆ ಸಲ್ಲಿಸುವುದು. ಮತ್ತು ಕಾಲಕಾಲಕ್ಕೆ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಂಪರ್ಕಿಸಿ/ಪತ್ರ ವ್ಯವಹಾರ ನಡೆಸಿ ಶೀಘ್ರವಾಗಿ ವಿದ್ಯಾರ್ಥಿಗಳಿಗೆ ಸಾಲ ದೊರಕಿಸಿ ಕೊಡುವುದು. ಸದರಿ ವಿದ್ಯಾರ್ಥಿವೇತನದ ನೋಡಲ್ ಅಧಿಕಾರಿಯವರ ಮುಖ್ಯ ಕರ್ತವ್ಯವಾಗಿರುತ್ತದೆ.

ಮೇಲ್ಕಂಡ ಎಲ್ಲಾ ಅಂಶಗಳ ಬಗ್ಗೆ ಪ್ರಾಂಶುಪಾಲರು ಮೇಲುಸ್ತುವಾರಿ ನಿರ್ವಹಿಸುವುದು. ಮೇಲ್ಕಂಡಂತೆ ತಾವು ಕೈಗೊಂಡ ಕ್ರಮದ ಬಗ್ಗೆ ದಿ:31.08.2017 ರಂದು ಸಚಿತ್ರ ವರದಿ (with photographs) ಯನ್ನು ಈ ಕಛೇರಿಗೆ ಸಲ್ಲಿಸುವುದು.

ಸದರಿ ವರದಿಯಲ್ಲಿ ತಾವು ಕೈಗೊಂಡ ಕ್ರಮಗಳು ಮತ್ತು ಫಲಶೃತಿಯನ್ನು ಸಂಕ್ಷಿಪ್ತವಾಗಿ ವಿವರಿಸುವುದು. ಹಾಗೂ ಕಾಲೇಜಿನ ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ನೋಡಲ್ ಅಧಿಕಾರಿಯ ಹೆಸರು, ಪದನಾಮ, ದೂರವಾಣಿ/ಮೊಬೈಲ್ ಸಂಖ್ಯೆ, ಇ-ಮೇಲ್ ವಿಳಾಸ ಇತ್ಯಾದಿ ವಿವರಗಳನ್ನು ತಪ್ಪದೇ ಸಲ್ಲಿಸಬೇಕೆಂದು ತಿಳಿಸಲಾಗಿದೆ.

ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನ ಯೋಜನೆ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿದ್ದು ಯಾವುದೇ ವಿದ್ಯಾರ್ಥಿಯು ಬಡತನದ ಕಾರಣದಿಂದಾಗಿ ಉನ್ನತ ಶಿಕ್ಷಣದಿಂದ ವಂಚಿತರಾಗಬಾರದೆಂಬುದೇ ಸದರಿ ಯೋಜನೆಯ ಉದ್ಧೇಶವಾಗಿದೆ. ಆ ನಿಟ್ಟಿನಲ್ಲಿ ಪ್ರತಿಯೊಬ್ಬ ನೋಡಲ್ ಅಧಿಕಾರಿ & ಪ್ರಾಂಶುಪಾಲರು ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಿ ಸದರಿ ಯೋಜನೆಯನ್ನು ಯಶಸ್ವಿಗೊಳಿಸಬೇಕೆಂದು ಹಾಗೂ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

**ಕಾಲೇಜು ಶಿಕ್ಷಣ ನಿರ್ದೇಶಕರು (ಪ್ರಭಾರ)**

**ಇವರಿಗೆ :**

ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜಿನ ಪ್ರಾಂಶುಪಾಲರುಗಳು – ವೆಬ್ ಸೈಟ್ ಮೂಲಕ.

**ಪ್ರತಿ :**

ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ – ಸದರಿ ಯೋಜನೆ ಬಗ್ಗೆ ಪ್ರಾಂಶುಪಾಲರುಗಳಿಗೆ ಹಾಗೂ ನೋಡಲ್ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡುವುದು.